4. ಅರ್ಜಿಯನ್ನೊಪ್ಪಿಸುವುದು

ಶ್ರೀ ಆರ್. ಅಖಂಡ ಶ್ರೀನಿವಾಸ ಮೂರ್ತಿ (ಸದಸ್ಯರು, ಅರ್ಜಿಗಳ ಸಮಿತಿ):– ಮಾನ್ಯ ಅಧ್ಯಕ್ಷರೆ, ದಿನಗೂಲಿ ಸೇವೆ ಖಾಯಂ ನೌಕರರನ್ನು ಸಕ್ರಮಗೊಳಿಸಿ ಸದರಿ ಸೇವೆಯಿಂದ ನಿವೃತ್ತಿಗೊಂಡಿರುವ ಪಿಂಚಣಿ ಮತ್ತು ನಿವೃತ್ತಿವೇತನದ ಸೌಲಭ್ಯವನ್ನು ಇವರಿಗೂ ಸಹ ಮುಂದುವರಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ಆದೇಶ ನೀಡಬೇಕೆಂದು ವಿನಂತಿಸುತ್ತಾ ಈ ಅರ್ಜಿಯನ್ನು ಸದನಕ್ಕೆ ಒಪ್ಪಿಸುತ್ತಿದ್ದೇನೆ.

ಅಧ್ಯಕ್ಷರು:– ಒಪ್ಪಿಸಲಾಗಿದೆ.

5. ಶಾಸನ ರಚನೆ

(ಅ) ವಿಧೇಯಕಗಳನ್ನು ಮಂಡಿಸುವುದು

(i) ಕರ್ನಾಟಕ ಭೂ ಸುಧಾರಣೆಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2014

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು):– ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ಭೂ ಸುಧಾರಣೆಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

2014ನೇ ಸಾಲಿನ ಕರ್ನಾಟಕ ಭೂ ಸುಧಾರಣೆಗಳ ಮತ್ತು ಕೆಲವು ಇತರ ಕಾನೂನು(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.